ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/70/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:13.03.2023.

**ಸುತ್ತೋಲೆ**

ವಿಷಯ:ವಿದ್ಯಾರ್ಥಿವೇತನಕ್ಕೆ ಎಸ್‌ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿರುವ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡುವ ಬಗ್ಗೆ.

******

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ 2022-23 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ವಿವಿಧ ವಿದ್ಯಾರ್ಥಿವೇತನಕ್ಕಾಗಿ ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿರುತ್ತಾರೆ. ಆದರೆ ಬಹಳಷ್ಟು ವಿದ್ಯಾರ್ಥಿಗಳು ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಆಧಾರ್ ಸಂಖ್ಯೆ, ಬ್ಯಾಂಕ್‌ನ ಉಳಿತಾಯ ಖಾತೆಗೆ ಜೋಡಣೆಯಾಗದಿರುವುದು ಕಂಡುಬಂದಿರುತ್ತದೆ.

ಆದ್ದರಿಂದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನದ ಮೊತ್ತ ನೇರವಾಗಿ ಬ್ಯಾಂಕ್ ಖಾತೆಗೆ ಜಮೆಯಾಗುವುದರಿಂದ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್‌ನ ಉಳಿತಾಯ ಖಾತೆಗೆ ಆಧಾರ್ ಜೋಡಣೆಯಾಗಿರುವ ಬಗ್ಗೆ **DBT Karnataka APP** ಮೂಲಕ ಪರಿಶೀಲಿಸಿ, ಜೋಡಣೆಯಾಗದಿರುವ ಬಗ್ಗೆ ಖಪಡಿಸಿಕೊಂಡು, ಸಂಬಂDಪಟ್ಟ ಬ್ಯಾಂಕ್‌ಗಳನ್ನು ಸಂಪರ್ಕಿಸಿ, ತಮ್ಮ ಆಧಾರ ಸಂಖ್ಯೆಯನ್ನು ಸೀಡ್ ಮಾಡಿಸಿಕೊಳ್ಳಲು ಅಥವಾ IPPB (ಇಂಡಿಯ ಪೋಸ್ಟಲ್ ಪೇಮೆಂಟ್ ಬ್ಯಾಂಕ್ ಖಾತೆಯನ್ನು ತೆರೆಯಲು) ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

13.3.
ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ,

1. ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮವಹಿಸಲು.
2. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಾಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.

Adhar Seed Letter